# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **260** |
| ಮಾನ್ಯ ಸದಸ್ಯರ ಹೆಸರು | : | ಶ್ರೀ. ಹೆಚ್.ಎಮ್. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | ಮಾನ್ಯ ಕೃಷಿ ಸಚಿವರು |
| ಉತ್ತರಿಸುವ ಮಾನ್ಯ ಸಚಿವರು | : | 09-12-2020. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳೆ ಸಮೀಕ್ಷೆ ಆಪ್ ನಲ್ಲಿ ತಾಂತ್ರಿಕ ದೋಷಗಳು ಕಂಡುಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿರುತ್ತದೆ.<br>ಹಿಂದಿನ ವರ್ಷಗಳಲ್ಲಿ ಖಾಸಗಿ ನಿವಾಸಿಗಳ ಮೂಲಕ ಬೆಳೆ ಸಮೀಕ್ಷೆ ವಿವರಗಳನ್ನು ದಾಖಲಿಸುವ ಸಮಯದಲ್ಲಿ ಪ್ರಸಕ್ತ ಸರ್ವೇ ನಂಬರ್ ವಾರು ಮತ್ತು ಹಿಸ್ಸಾವಾರು ಡಿಜಿಟೈಸ್ಡ್ ನಕ್ಷೆಗಳು ಲಭ್ಯವಿಲ್ಲದ ಕಾರಣ ಒಂದು ಸರ್ವೇ ನಂಬರ್ ನಲ್ಲಿ ಹಲವಾರು ಹಿಸ್ಸಾಗಳು ಇರುವ ಕಡೆ ದಾಖಲಾದ ಬೆಳೆ ವಿವರಗಳು ತಾಳೆಯಾಗುತ್ತಿರಲಿಲ್ಲ. ಆದರೆ ಪ್ರಸ್ತುತ ವರ್ಷದಿಂದ ಬೆಳೆ ಸಮೀಕ್ಷೆಯಲ್ಲಿ ದಾಖಲಾಗುತ್ತಿರುವ ಮಾಹಿತಿಯು ನಿಖರವಾಗಿ ಬರುವ ನಿಟ್ಟಿನಲ್ಲಿ ಈ ಕೆಳಕಂಡ ಕ್ರಮಗಳನ್ನುಕೈಗೊಳ್ಳಲಾಗಿದೆ.<br>ಅ. ಹೆಚ್ಚಿನ ಸಂಖ್ಯೆಯಲ್ಲಿ ರೈತರೇ ಸ್ವತಃ ಭಾಗವಹಿಸಿ ವಿವರಗಳನ್ನು ನಮೂದಿಸುವುದರಿಂದ ವ್ಯತ್ಯಾಸಗಳು ಕಡಿಮೆಯಾಗಿ ರೈತರ ಸಬಲೀಕರಣವಾಗುವುದಕ್ಕೆ ಒತ್ತು ನೀಡಲಾಗಿರುತ್ತದೆ. (ಇದಕ್ಕಾಗಿ ಪ್ರತ್ಯೇಕವಾಗಿ ರೈತರ ಮೊಬೈಲ್ ಆಪ್ ಬಿಡುಗಡೆಗೊಳಿಸಲಾಗಿರುತ್ತದೆ)<br>ಆ. ಬೆಳೆ ಸಮೀಕ್ಷೆ ಕುರಿತು ಎಲ್ಲಾ ಮಾಧ್ಯಮಗಳ ಮೂಲಕ ಹೆಚ್ಚಿನ ಪ್ರಚಾರವನ್ನು ನೀಡಲಾಗುತ್ತಿದೆ ಜನಪ್ರತಿನಿಧಿಗಳು ಸಹ ಬೆಳೆ ಸಮೀಕ್ಷೆ ಕಾರ್ಯದಲ್ಲಿ ಭಾಗವಹಿಸಿರುತ್ತಾರೆ.<br>ಇ. ಬೆಳೆ ಸಮೀಕ್ಷೆ ಕಾರ್ಯಕ್ರಮದ ಅಂಗವಾಗಿರುವ ಎಲ್ಲಾ |

| | | |
|---|---|---|
| | | ಅಧಿಕಾರಿ / ಸಿಬ್ಬಂದಿ ವರ್ಗದವರಿಗೆ / ಆಯಾ ಜಿಲ್ಲೆ / ತಾಲ್ಲೂಕು / ಹೋಬಳಿ / ಗ್ರಾಮಗಳಲ್ಲಿ ಬೆಳೆಯುವ ಎಲ್ಲಾ ಬೆಳೆಗಳ ಕುರಿತಾಗಿ ಅಗತ್ಯ ತರಬೇತಿಯನ್ನು ಸಂಪನ್ಮೂಲ ವ್ಯಕ್ತಿಗಳ ಮೂಲಕ ಹಮ್ಮಿಕೊಳ್ಳಲಾಗಿರುತ್ತದೆ.<br>ಈ. ವಿವಿಧ ಹಂತಗಳ ಅಧಿಕಾರಿಗಳಿಂದ ಮೇಲ್ವಿಚಾರಣೆ ಮತ್ತು ಉಸ್ತುವಾರಿಯನ್ನು ಪರಿಣಾಮಕಾರಿಯಾಗಿ ಕೈಗೊಳ್ಳಲಾಗುತ್ತಿದೆ.<br>ಉ. ಈ ಎಲ್ಲಾ ಕ್ರಮಗಳ ಜೊತೆಗೆ ಸಮೀಕ್ಷೆಯಲ್ಲಿ ಉಂಟಾಗುವ ವ್ಯತ್ಯಾಸಗಳನ್ನು ಸರಿಪಡಿಸಿಕೊಳ್ಳಲು ಬೆಳೆ ದರ್ಶಕ್ ಆಪ್ ಮೂಲಕ ರೈತರು ಆಕ್ಷೇಪಣೆಗಳನ್ನು ಸಲ್ಲಿಸಿ ಮರು ಸಮೀಕ್ಷೆಯ ಮೂಲಕ ತಪ್ಪುಗಳನ್ನು ಸರಿಪಡಿಸಿಕೊಳ್ಳಲು ಅವಕಾಶವನ್ನು ಸಹ ಕಲ್ಪಿಸಿದೆ.<br>ಊ. ನಿಖರವಾದ ಮಾಹಿತಿ ಸಂಗ್ರಹಿಸಲು ಜಿ.ಪಿ.ಎಸ್ ಆಧಾರಿತ ಸಮೀಕ್ಷೆಯನ್ನು ನಡೆಸುತ್ತಿರುವ ಜೊತೆಗೆ, ರೈತರ, ಸಮೀಕ್ಷೆದಾರರ, ಅನುಮೋದಿಸುವವರ ಮತ್ತು ಗುಣನಿಯಂತ್ರಣ ಅಧಿಕಾರಿಗಳ ಸಂಪೂರ್ಣ ವಿವರಗಳನ್ನು ಸೆರೆಹಿಡಿಯುವುದು ಮತ್ತು ಉಸ್ತುವಾರಿಯನ್ನು ಮಾಡಲಾಗುತ್ತಿದೆ. |
| ಆ) | ರೈತರ ಹೆಸರಿನಲ್ಲಿ ರಸಗೊಬ್ಬರ ಖರೀದಿಯಲ್ಲಿ ಕೆಲವು ಖಾಸಗಿ ಸಂಸ್ಥೆಗಳು ನಕಲಿ ಬಿಲ್ ಗಳನ್ನು ನೀಡಿ ಹಣ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ; | ಬಂದಿದೆ. ಈ ಬಗ್ಗೆ ಕೈಗೊಂಡ ಕ್ರಮಗಳು ಕೆಳಗಿನಂತಿವೆ:<br>➢ ಕೇಂದ್ರ ಸರ್ಕಾರದ ಸೂಚನೆಯನ್ವಯ ರಸಗೊಬ್ಬರದಲ್ಲಿ ನೇರ ನೆರವು ವರ್ಗಾವಣೆ (DBT in Fertilizers subsidy Payment System) ಯೋಜನೆಯಡಿ ಜನವರಿ 01, 2018 ರಿಂದ POS ಉಪಕರಣದ ಮೂಲಕವೇ ರಸಗೊಬ್ಬರಗಳನ್ನು ಮಾರಾಟ ಮಾಡಲಾಗುತ್ತಿದೆ. ಡಿಬಿಟಿ ವ್ಯವಸ್ಥೆಯಲ್ಲಿ, ರಿಯಾಯಿತಿ ರಸಗೊಬ್ಬರಗಳ ಮಾರಾಟವನ್ನು ರೈತರಿಗೆ/ಖರೀದಿದಾರರಿಗೆ ಆಧಾರ್ ದೃಢೀಕರಣದ ಆಧಾರದ ಮೇಲೆ ಮಾಡಲಾಗುತ್ತಿದೆ. |

| | | |
|---|---|---|
| | | ➢ ರಸಗೊಬ್ಬರದ ಮಾರಾಟದಲ್ಲಿ ಪಾರದರ್ಶಕತೆಯನ್ನು ತರಲು ಡಿಜಿಟಲ್ ವಹಿವಾಟುಗಳನ್ನು ಉತ್ತೇಜಿಸುವ ಸಲುವಾಗಿ, ಎಲ್ಲಾ ರಸಗೊಬ್ಬರ ಚಿಲ್ಲರೆ ವ್ಯಾಪಾರಿಗಳಲ್ಲಿ ನಗದು ರಹಿತ/ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ಜಾರಿಗೆ ತರಲು ಅರಿವು ಮೂಡಿಸಲು ಸೂಕ್ತ ಕ್ರಮ ವಹಿಸಲಾಗುತ್ತಿದೆ.<br>➢ ಪ್ರತಿ ಜಿಲ್ಲೆಯಲ್ಲಿಯೂ ಸಹಾಯಕ ಕೃಷಿ ನಿರ್ದೇಶಕರ ನೇತೃತ್ವದಲ್ಲಿ ವಿಜಿಲೆನ್ಸ್ ತಂಡಗಳನ್ನು ರಚಿಸಲಾಗಿದ್ದು, ತಂಡದ ಸದಸ್ಯರು ಮತ್ತು ರಾಜ್ಯದಲ್ಲಿ ಅಧಿಸೂಚಿಸಿರುವ ರಸಗೊಬ್ಬರ ಪರಿವೀಕ್ಷಕರು ಅವರ ವ್ಯಾಪ್ತಿಯಲ್ಲಿನ ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಭೇಟಿ ನೀಡಿ ಮಾರಾಟ ಮಳಿಗೆಗಳಲ್ಲಿ ರಸಗೊಬ್ಬರ ನಿಯಂತ್ರಣ ಆದೇಶ 1985 ರನ್ವಯ ಸೂಕ್ತ ಕ್ರಮ ವಹಿಸಲಾಗುತ್ತಿದೆ.<br>➢ ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿ ಇಲಾಖೆಯ ರಸಗೊಬ್ಬರ ಪರಿವೀಕ್ಷಕರು ತಪಾಸಣೆ ನಡೆಸಿ ರಸಗೊಬ್ಬರ ನಿಯಂತ್ರಣ ಆದೇಶ-1985 ಅನ್ನು ಉಲ್ಲಂಘಿಸಿರುವ 503 ರಸಗೊಬ್ಬರ ಮಾರಾಟಗಾರರ ಪರವಾನಗಿಯನ್ನು ಅಮಾನತ್ತು ಗೊಳಿಸಿರುತ್ತಾರೆ.<br>ಮೈಸೂರು ಮತ್ತು ಕೋಲಾರ ಜಿಲ್ಲೆಗಳಲ್ಲಿ ಯೂರಿಯಾ ರಸಗೊಬ್ಬರವನ್ನು ಕೃಷಿಯೇತರ ಚಟುವಟಿಕೆಗಳಿಗೆ ಬಳಕೆಯಾಗುತ್ತಿರುವ ಪ್ರಕರಣಗಳ ಬಗ್ಗೆ ಪತ್ತೆ ಹಚ್ಚಿ ಎಫ್.ಐ.ಆರ್ ದಾಖಲಿಸಲಾಗಿದೆ. |
| ಇ) | ರಾಜ್ಯದ ಸ್ಥಳೀಯ ಭತ್ತದ ತಳಿಗಳ ಅಭಿವೃದ್ಧಿ ಮತ್ತು ಸಮಗ್ರ ಕೃಷಿ ಸಾವಯವ ವ್ಯವಸಾಯ ಮುಂತಾದ ಕಾರ್ಯಕ್ರಮಗಳಿಗೆ ಪ್ರಸಕ್ತ ಸಾಲಿನಲ್ಲಿ ಎಷ್ಟು ಹಣ ಮೀಸಲಿಡಲಾಗಿತ್ತು; ಖರ್ಚಾದ ಹಣ ಎಷ್ಟು; | 2020-21ನೇ ಸಾಲಿನ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ ಯೋಜನೆಯಡಿ ಸುಧಾರಿತ ಬಿತ್ತನೆ ಬೀಜ ವಿತರಣಾ ಕಾರ್ಯಕ್ರಮವಿದ್ದು, ಸ್ಥಳೀಯ ಭತ್ತದ ತಳಿಗಳ ಅಭಿವೃದ್ಧಿ ಮತ್ತು ಸಮಗ್ರ ಕೃಷಿ ಸಾವಯವ ವ್ಯವಸಾಯ ಕುರಿತು ಯಾವುದೇ ಕಾರ್ಯಕ್ರಮ ಇರುವುದಿಲ್ಲ. |

| | | |
|---|---|---|
| ಈ) | ರಾಜ್ಯದ ಕೆಲವೆಡೆ ಈ ವರ್ಷ ಈರುಳ್ಳಿ ಬೆಳೆ ಸಂಪೂರ್ಣವಾಗಿ ನಾಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈರುಳ್ಳಿ ಹಿತರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ಬಂದಿದೆ.<br>2020-21 ನೇ ಸಾಲಿನಲ್ಲಿ ಸಂಭವಿಸಿದ ಅತಿವೃಷ್ಟಿಯಿಂದ ಒಟ್ಟು 1.14 ಲಕ್ಷ ಹೆಕ್ಟರ್ ಪ್ರದೇಶದಲ್ಲಿ ಈರುಳ್ಳಿ ಬೆಳೆ ಹಾನಿಯಾಗಿರುತ್ತದೆ. SDRF/NDRF ಮಾರ್ಗಸೂಚಿಯನ್ವಯ ಈರುಳ್ಳಿ ಬೆಳೆ ಸೇರಿದಂತೆ ಇತರೆ ತೋಟಗಾರಿಕೆ ಬೆಳೆಗಳಿಗೆ ಒಟ್ಟು ರೂ.185.30 ಕೋಟಿಗಳ ಪರಿಹಾರವನ್ನು ಕಂದಾಯ ಇಲಾಖೆಯ ಮುಖಾಂತರ ವಿತರಿಸಲು ಕ್ರಮ ವಹಿಸಲಾಗಿದೆ. |

**ಸಂಖ್ಯೆ:- ಕೃಇ/151/ಕೃಕೈಉ/2020**

(ಬಿ.ಸಿ.ಪಾಟೀಲ್)
ಕೃಷಿ ಸಚಿವರು